# <u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಶಹಬಾದ</u>

**CC No: 166/2020**

| | | |
|---|---|---|
| CW : 11 | | PW: 5 |
| ಹೆಸರು | : | ಅಮರೇಶ |
| ತಂದೆಯ ಹೆಸರು | : | ಭೀಮರಾಯ |
| ವಯಸ್ಸು | : | 52 ವರ್ಷ |
| ಉದ್ಯೋಗ | : | ಪೊಲೀಸ್ ಇನ್ಸಪೆಕ್ಟರ್ |
| ಸ್ಥಳ | : | ಟ್ರಾಫಿಕ್-2, ಕಲಬುರಗಿ ನಗರ ಠಾಣೆ |

**(ದಿನಾಂಕ: 22-09-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು)**

**<u>ಮುಖ್ಯ ವಿಚಾರಣೆ: ಸ.ಸ.ಅ ವಕೀಲರಿಂದ</u>**

ನಾನು ದಿ: 21/10/2019 ರಿಂದ 12/02/2021 ರವರೆಗೆ ಶಹಬಾದ ನಗರ ಪೋಲಿಸ್ ಠಾಣೆಯಲ್ಲಿ ಪಿ.ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ. ದಿ: 21/10/2019 ರಂದು ಚಾಸಾ-10 ರವರಿಂದ ಪ್ರಕರಣದ ಕಡತಗಳನ್ನು ಪಡೆದುಕೊಂಡು ಪರಿಶೀಲಿಸಿರುತ್ತೇನೆ. ಅದಾಗಲೇ ಪ್ರಕರಣದ ತನಿಖೆ ಪೂರ್ಣಗೊಂಡಿದ್ದು, ಆರೋಪಿತನ ವಿರುದ್ದ ಸಾಕಷ್ಟು ಸಾಕ್ಷ್ಯಾಧಾರ ಕಂಡುಬಂದಿದ್ದರಿಂದ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಸಾಕ್ಷಿಯು ಮು.ಮಾ.1 ನ್ನು ನೋಡಿ ಗುರುತಿಸುತ್ತಾರೆ. ಸಾಕ್ಷಿಯು ನಿ.ಪಿ.3 ಒಂದು ಛಾಯಾಚಿತ್ರವನ್ನು ನೋಡಿ ಗುರುತಿಸುತ್ತಾರೆ.

**<u>ಪಾಟೀ ಸವಾಲು: ಆರೋಪಿಗಳ ಪರ ಶ್ರೀ ಟಿ.ಹೆಚ್.ಎಮ್. ವಕೀಲರಿಂದ:</u>**

ದಿ: 21/10/2019 ರಂದು ಚಾಸಾ-10 ರವರಿಂದ ಪ್ರಕರಣದ ಕಡತಗಳನ್ನು ಪಡೆದುಕೊಂಡು ಪರಿಶೀಲಿಸಿರುವುದಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಯಾವುದೇ ತನಿಖೆ ಮಾಡದೇ ಇದ್ದರೂ ಸಹ ಆರೋಪಿ ಹಾಗೂ ಪ್ರಕರಣಕ್ಕೆ ಯಾವುದೇ ಸಂಬಂಧ ಇಲ್ಲದೇ ಇದ್ದರೂ ಸಹ ಆರೋಪಿತನ ವಿರುದ್ದ ಖೊಟ್ಟಿ ದೋಷಾರೋಪಣೆ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ: ಇರುವುದಿಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೆ. ಸರಿ ಇದೆ.**

**Sd/-**
**ಸಿವಿಲ್ ಹಾಗೂ ಜೆ.ಎಮ್.ಎಫ್.ಸಿ.**
**ನ್ಯಾಯಾಧೀಶರು, ಶಹಬಾದ.**